**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 751

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 21.02.2024

| ಕ್ರ. ಸಂ. | ಪ್ರಶ್ನೆ | ಉತ್ತರ |
| --- | --- | --- |
| ಅ. | ದಕ್ಷಿಣ ಕನ್ನಡ ಜಿಲ್ಲೆಯ ಹಲವಾರು ಪಟ್ಟಣಗಳಲ್ಲಿ ಸುಸಜ್ಜಿತ ಬಸ್ ನಿಲ್ದಾಣಗಳು ಇಲ್ಲದಿರುವುದು ಹಾಗೂ ಈಗಾಗಲೇ ಇರುವ ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಪ್ರಯಾಣಿಕರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯ ಮಂಗಳೂರು, ಬಂಟ್ವಾಳ ಕ್ರಾಸ್, ಸುಳ್ಯ ಮತ್ತು ಪುತ್ತೂರು ಈ 04 ಸ್ಥಳಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣಗಳಿರುತ್ತದೆ.<br><br>ಸದರಿ 04 ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಗೃಹ / ಶಿಶು ಆರೈಕೆ ಕೊಠಡಿ, ಬಸ್ ನಿಲುಗಡೆ ಪ್ಲಾಟ್‌ಫಾರಂ, ಆಸನ ವ್ಯವಸ್ಥೆ ಹಾಗೂ ಸಮರ್ಪಕ ಬೆಳಕಿನ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. |
| ಆ. | ಬಂದಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಎಷ್ಟು ಸುಸಜ್ಜಿತ ನಿಲ್ದಾಣಗಳನ್ನು ನಿರ್ಮಾಣ ಮಾಡಲಾಗಿದೆ; ಹಾಗೂ ಸದರಿ ಕಾಮಗಾರಿಗಳಿಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; | 2022-23ನೇ ಸಾಲಿನಲ್ಲಿ ಬೆಳ್ತಂಗಡಿಯಲ್ಲಿ ಹೊಸ ಬಸ್ ನಿಲ್ದಾಣವನ್ನು ರೂ.12.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |
| ಇ. | ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಾಲಿ ಇರುವ ಎಷ್ಟು ಬಸ್ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು? | ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವುದೇ ಬಸ್ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಿರುವುದಿಲ್ಲ. ಆದ್ದರಿಂದ, ಅನುದಾನದ ವಿನಿಯೋಗದ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಟಿಡಿ52 ಟಿಸಿಕ್ಯೂ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು